ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ : 2014-15ನೇ ಸಾಲಿನಲ್ಲಿ ಕಲಬುರ್ಗಿ ಜಿಲ್ಲೆಗೆ ಸೌರ ಬೆಳಕು ಯೋಜನೆಯಡಿ ಶೇ. 100%ರಷ್ಟು ಅನುದಾನ ಬಿಡುಗಡೆ – ಕುರಿತು.

ಓದಲಾಗಿದೆ : 1) ಸರ್ಕಾರಿ ಆದೇಶ ಸಂಖ್ಯೆ : ಗ್ರಾಅಪ 241 ಎಎಫ್ಎನ್ 2013 ದಿನಾಂಕ 01.08.2013 ಕ್ರ.ಸಂ. VII (45)

2) ಸರ್ಕಾರಿ ಆದೇಶ ಸಂಖ್ಯೆ : ಗ್ರಾಅಪ 5 ಗ್ರಾಇಂಕಾ 2009 ದಿನಾಂಕ 14.07.2009

3) ಸರ್ಕಾರಿ ಸುತ್ತೋಲೆ ಸಂಖ್ಯೆ: ಗ್ರಾಅಪ/22/ಜೈಅಯೋ/2014 ದಿನಾಂಕ25.09.2014

4) ಸರ್ಕಾರಿ ಪತ್ರ ಸಂಖ್ಯೆ : ಗ್ರಾಅಪ/22/ಜೈಅಯೋ/2014 ದಿನಾಂಕ 25.09.2014

*****

**ಪ್ರಸ್ತಾವನೆ :**

2014-15ನೇ ಸಾಲಿನ ಆಯವ್ಯಯದಲ್ಲಿ ಸೌರ ಬೆಳಕು ಯೋಜನೆಯಲ್ಲಿ ಆಯ್ದ ಗ್ರಾಮ ಪಂಚಾಯಿತಿಗಳಲ್ಲಿ ಸೌರ ಬೀದಿ ದೀಪ ಅಳವಡಿಸುವ ಕಾರ್ಯಕ್ಕೆ ಉಲ್ಲೇಖ (4)ರ ಸರ್ಕಾರಿ ಸುತ್ತೋಲೆಯಲ್ಲಿ ಈ ಯೋಜನೆಯನ್ನು ಕೇಂದ್ರೀಕೃತ ಸೌರ ವಿದ್ಯುತ್ ಘಟಕ ಅಳವಡಿಸುವ ಕಾರ್ಯಕ್ಕೆ ಮಾರ್ಗಸೂಚಿಯನ್ನು ನೀಡಲಾಗಿದೆ. ಅದರಂತೆ 2014-15ನೇ ಸಾಲಿನಲ್ಲಿ ಗುಲ್ಬರ್ಗಾ ಜಿಲ್ಲೆ ಅಳಂದ ತಾಲ್ಲೂಕಿನ ಶುಕ್ರವಾಡಿ ಗ್ರಾಮದಲ್ಲಿ ಕೇಂದ್ರೀಕೃತ ಸೌರ ಬೀದಿ ದೀಪ ಘಟಕಗಳನ್ನು ಇ-ಟೆಂಡರ್ ಮೂಲಕ ಅಳವಡಿಸಲು ಸರ್ಕಾರವು ತೀರ್ಮಾನಿಸಿದೆ ಪ್ರಯುಕ್ತ ಈ ಆದೇಶ.

**ಸರ್ಕಾರಿ ಆದೇಶ ಸಂಖ್ಯೆ : ಗ್ರಾಅಪ/22/ಜೈಅಯೋ/2014(ಪಿ) ಬೆಂಗಳೂರು, ದಿನಾಂಕ 06.02.2015**

ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನಲೆಯಲ್ಲಿ 2014-15ನೇ ಸಾಲಿನಲ್ಲಿ ಗುಲ್ಬರ್ಗಾ ಜಿಲ್ಲೆ ಅಳಂದ ತಾಲ್ಲೂಕಿನ ಶುಕ್ರವಾಡಿ ಗ್ರಾಮದಲ್ಲಿ ಕೇಂದ್ರೀಕೃತ ಸೌರ ವಿದ್ಯುತ್ ಘಟಕ ಸ್ಥಾಪಿಸಿ, ಸಂಪೂರ್ಣ ಸೌರ ಬೀದಿ ದೀಪಗಳನ್ನು ಅಳವಡಿಸಿ ಅನುಷ್ಠಾನಗೊಳಿಸಲು ನೂತನ ಸೌರ ಬೆಳಕು ಯೋಜನೆಯನ್ವಯ ಲೆಕ್ಕ ಶೀರ್ಷಿಕೆ (2810-01-198-1-01-300)ಯೋಜನೆ ಅಡಿಯಲ್ಲಿ ₹ 15.00 ಲಕ್ಷಗಳನ್ನು (ರೂ. ಹದಿನೈದು ಲಕ್ಷಗಳು ಮಾತ್ರ) ಅನುದಾನ ವೆಚ್ಚದಲ್ಲಿ ವಿಶೇಷ ಪ್ರಕರಣವೆಂದು ಪರಿಗಣಿಸಿ, ಪೂರ್ಣ ಅನುದಾನವನ್ನು ಶೇ.100% ರಷ್ಟು ಅನುದಾನವನ್ನು ಬಿಡುಗಡೆಗೊಳಿಸಿದೆ.

ಸದರಿ ಅನುದಾನವು ಮಹಾಲೇಖಪಾಲರ ಲೆಕ್ಕ ತಪಾಸಣೆಗೊಳಪಟ್ಟಿರುತ್ತದೆ. ಸದರಿ ಅನುದಾನವನ್ನು ಉದ್ದೇಶಿತ ಕಾರ್ಯಕ್ರಮಕ್ಕಾಗಿ ವಿನಿಯೋಗಿಸತಕ್ಕದ್ದು.

ಹಾಲಿ ಬಿಡುಗಡೆ ಮಾಡಲಾಗುತ್ತಿರುವ ಅನುದಾನವನ್ನು ಆರ್ಥಿಕ ಇಲಾಖೆಯ ಅನಧಿಕೃತ ಟಿಪ್ಪಣಿ ಸಂಖ್ಯೆ : ಆಇ/2/ವೆಚ್ಚ-6/2015 ದಿನಾಂಕ 02.02.2015ರಲ್ಲಿ ಸಹಮತಿಯನ್ನು ಪಡೆದು ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಎನ್. ಕೃಷ್ಣಪ್ಪ)
ನಿರ್ದೇಶಕರು (ಗ್ರಾಮೂಸೌ-2) ಹಾಗೂ
ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿ,
ಗ್ರಾಮೀಣ ಅಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

ಇವರಿಗೆ,

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.

2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್, ಕಲಬುರ್ಗಿ ಜಿಲ್ಲೆ
3. ನಿರ್ದೇಶಕರು, ಖಜಾನೆ ಇಲಾಖೆ, ಬೆಂಗಳೂರು.
4. ಜಿಲ್ಲಾ ಖಜಾನಾಧಿಕಾರಿಗಳು, ಕಲಬುರ್ಗಿ ಜಿಲ್ಲೆ
5. ಉಪ ನಿರ್ದೇಶಕರು, ನೆಟ್‌ವರ್ಕ್ ಮ್ಯಾನೇಜ್‌ಮೆಂಟ್ ಸೆಂಟರ್ ನಂ. 49, ಸೆಕೆಂಡ್ ಬ್ಲಾಕ್, ಸೆಕೆಂಡ್ ಫ್ಲೋರ್, ಖನಿಜ ಭವನ, ಸೌತ್ ಎಂಟ್ರೆನ್ಸ್, ರೇಸ್ ಕೋರ್ಸ್ ರಸ್ತೆ, ಬೆಂಗಳೂರು.
6. ವಿಶೇಷ ಅಧಿಕಾರಿಗಳು, ಗಣಕ ಕೋಶ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಪ್ರತಿಯನ್ನು :

1. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು / ಕಾರ್ಯದರ್ಶಿಗಳು (ಪಂ.ರಾ) ರವರ ಆಪ್ತ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
3. ರಕ್ಷಾ ಕಡತಕ್ಕೆ / ಹೆಚ್ಚುವರಿ ಪ್ರತಿಗಳು.